ಕರ್ನಾಟಕ ಸರ್ಕಾರ



**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ**

**6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003**

# ನಮ್ಮ ಚಿತ್ತ ಪರೀಕ್ಷೆಯತ್ತ







ವಿದ್ಯಾರ್ಥಿಗಾಗಿ ಶಿಕ್ಷಕರಿಗಾಗಿ ಪೋಷಕರಿಗಾಗಿ

## 2023-24 ನೇ ಸಾಲಿನ ದ್ವಿತೀಯ ಪಿ.ಯು.ಸಿ. ಪರೀಕ್ಷೆ-1, ಪರೀಕ್ಷೆ-2 ಮತ್ತು ಪರೀಕ್ಷೆ-3 ಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು / ಶಿಕ್ಷಕರು / ಪೋಷಕರಿಗೆ ಮಾಹಿತಿ

1. 2023–24 ರ ಶೈಕ್ಷಣಿಕ ವರ್ಷದಿಂದ ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ವತಿಯಿಂದ ಪರೀಕ್ಷೆ–1, ಪರೀಕ್ಷೆ–2 ಮತ್ತು ಪರೀಕ್ಷೆ–3 ಎಂದು ಒಟ್ಟು ಮೂರು (03) ಪರೀಕ್ಷೆಗಳನ್ನು ನಡೆಸಲಾಗುತ್ತದೆ.
2. 2023–24 ರಿಂದ ಪೂರಕ ಪರೀಕ್ಷೆ ಇರುವುದಿಲ್ಲ, ಬದಲಾಗಿ ವರ್ಷಕ್ಕೆ ಮೂರು ಪರೀಕ್ಷೆಗಳನ್ನು ನಡೆಸಲಾಗುತ್ತಿದ್ದು, ಸದರಿ ಪರೀಕ್ಷೆಗಳನ್ನು ಕ್ರಮವಾಗಿ ಪರೀಕ್ಷೆ–1, ಪರೀಕ್ಷೆ–2 ಮತ್ತು ಪರೀಕ್ಷೆ–3 ಎಂದು ಕರೆಯಲಾಗುತ್ತದೆ. ಆದರೆ ಮೂರೂ ಪರೀಕ್ಷೆಗಳನ್ನು ಬರೆಯುವುದು ಕಡ್ಡಾಯವಲ್ಲ.
3. ಪರೀಕ್ಷೆ–1 ಕ್ಕೆ ಹಾಜರಾಗುವ ವಿದ್ಯಾರ್ಥಿಗಳಿಗೆ ಶೇಕಡ 75 ರಷ್ಟು ಹಾಜರಾತಿ ಕಡ್ಡಾಯವಾಗಿ ಇರಲೇಬೇಕು.
4. ಪ್ರಥಮ ಬಾರಿಗೆ ಪರೀಕ್ಷೆ ತೆಗೆದುಕೊಳ್ಳುವ ರೆಗ್ಯುಲರ್ ವಿದ್ಯಾರ್ಥಿಗಳು ಮತ್ತು ಖಾಸಗಿ ವಿದ್ಯಾರ್ಥಿಗಳು ಪರೀಕ್ಷೆ– 1ಕ್ಕೆ ನೋಂದಾಯಿಸಿಕೊಳ್ಳುವುದು ಕಡ್ಡಾಯ.
5. ಪ್ರಯೋಗಗಳಿರುವ ವಿಷಯಗಳಿಗೆ ತಾತ್ವಿಕ ಪರೀಕ್ಷೆಯನ್ನು 70 ಅಂಕಗಳಿಗೆ ಹಾಗೂ ಪ್ರಯೋಗೇತರ ವಿಷಯಗಳಿಗೆ ತಾತ್ವಿಕ ಪರೀಕ್ಷೆಯನ್ನು 80 ಅಂಕಗಳಿಗೆ ನಡೆಸಲಾಗುತ್ತದೆ.
6. ಪರೀಕ್ಷೆ–1 ರಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಪರೀಕ್ಷೆ–2 & ಪರೀಕ್ಷೆ–3 ನ್ನು ತೆಗೆದುಕೊಳ್ಳಲು ಇಚ್ಛಿಸದಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಅಂಕ ಪಟ್ಟಿಯನ್ನು ವಿತರಿಸಲಾಗುವುದು.
7. ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಪುನ: ಪರೀಕ್ಷೆಗೆ ನೋಂದಾಯಿಸಿಕೊಂಡು ಹಾಜರಾಗಿ ತಮ್ಮ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಬಹುದಾಗಿದೆ.
8. 2023–24 ರ ಮೂರು ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳ ವಿಷಯ ಮತ್ತು ಕಠಿಣತೆಯ ಮಟ್ಟದಲ್ಲಿ ಏಕರೂಪತೆಯನ್ನು ಹೊಂದಿರುತ್ತವೆ.
9. ಪರೀಕ್ಷೆಯಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡುವ ಸಲುವಾಗಿ ಒಂದು ಬಾರಿ ಮಾತ್ರ ನಿಗದಿತ ಶುಲ್ಕವನ್ನು ಪಡೆಯಲಾಗುವುದು.
10. ಪರೀಕ್ಷೆ–1 ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪುನ: ಪರೀಕ್ಷೆ ಬರೆಯಲು ಅನಿಯಮಿತ ಅವಕಾಶಗಳಿರುತ್ತವೆ.
11. ಕಲಿಕಾ ನ್ಯೂನತೆ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಹಿಂದಿನ ಸಾಲಿನಲ್ಲಿ ನೀಡಲಾಗಿದ್ದ ಎಲ್ಲಾ ಸೌಲಭ್ಯಗಳನ್ನು ಮುಂದುವರೆಸಲಾಗಿದೆ.
12. ಆಯಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ಅಂಕಪಟ್ಟಿಯು ತುರ್ತಾಗಿ ಅಗತ್ಯವಿದ್ದಲ್ಲಿ ಡಿಜಿಲಾಕರ್‌ನಲ್ಲಿ ಪಡೆಯಬಹುದಾಗಿದೆ.
13. ಫಲಿತಾಂಶ/ಅಂಕಗಳನ್ನು ಉತ್ತಮಪಡಿಸಿಕೊಳ್ಳಲು ವಿದ್ಯಾರ್ಥಿಯು ಪರೀಕ್ಷೆ–1ರ ನಂತರ ಪರೀಕ್ಷೆ–2, 3ಕ್ಕೆ ಹಾಜರಾಗಿದ್ದರೆ, ಹಾಜರಾದ ಪರೀಕ್ಷೆಗಳ ವಿಷಯಗಳಲ್ಲಿ ಗಳಿಸಿದ ಅತಿ ಹೆಚ್ಚು ಅಂಕಗಳನ್ನು ಫಲಿತಾಂಶ ಪ್ರಕಟಣೆಗೆ ಪರಿಗಣಿಸಲಾಗುವುದು.
14. ಪರೀಕ್ಷೆ–1ರಲ್ಲಿ ಪಡೆದ ಆಂತರಿಕ ಅಂಕಗಳು ಹಾಗೂ ಪ್ರಾಯೋಗಿಕ ಪರೀಕ್ಷೆಯ ಅಂಕಗಳೇ ಅಂತಿಮವಾಗಿರುತ್ತವೆ.
15. 2024 ರ ಹಿಂದಿನ ಪುನರಾವರ್ತಿತ ವಿದ್ಯಾರ್ಥಿಗಳಿಗೆ 80 ಅಂಕಗಳಿಗೆ ಪರೀಕ್ಷೆ ಇದ್ದು, ಆಂತರಿಕ ಅಂಕಗಳು ಇರುವುದಿಲ್ಲ. ಆದರೆ 80 ಅಂಕಗಳ ಪ್ರಶ್ನೆಪತ್ರಿಕೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಿ 100ಕ್ಕೆ Scale up ಮಾಡಲಾಗುವುದು.

ನಿರ್ದೇಶಕರು ( ಪರೀಕ್ಷೆಗಳು )
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
ಬೆಂಗಳೂರು

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
ಬೆಂಗಳೂರು